ಕರ್ನಾಟಕ ಸರ್ಕಾರ

**ಕೇಂದ್ರೀಕೃತ ದಾಖಲಾತಿ ಘಟಕ, ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಕೆ ಜಿ ರಸ್ತೆ, ಬೆಂಗಳೂರು-09**

**ದೂ:080-22483140, 22483145, 9449588020, Email: cackarnataka1@gmail.com**

==============================================================

ಸಂಖ್ಯೆ: ಸಿಎಸಿ-05/ಪತ್ರಿಕಾ.ಪ್ರ/ನೇಮಕಾತಿ/01/2026-27 ದಿನಾಂಕ:24/09/2026

## ::ಪ್ರಕಟಣೆ::

ಶಾಲಾ ಶಿಕ್ಷಣ ಇಲಾಖೆಯ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ ವಿವಿಧ ವೃಂದದ (PST- ಸಾಮಾನ್ಯ ಶಿಕ್ಷಕ (1 ರಿಂದ 5ನೇ ತರಗತಿ) PE-ಗ್ರೇಡ್-II (1 ರಿಂದ 8ನೇ ತರಗತಿ) GPT (6 ರಿಂದ 8ನೇ ತರಗತಿ), CST (1-8ನೇ ತರಗತಿ) ಶಿಕ್ಷಕರ ಹುದ್ದೆಗಳಿಗೆ ಹಾಗೂ ಸರ್ಕಾರಿ ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಸಹಶಿಕ್ಷಕರ (AM) ವೃಂದ, ದೈಹಿಕ ಶಿಕ್ಷಣ ಶಿಕ್ಷಕ ಗ್ರೇಡ್-1 ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ಆಯಾ ಜಿಲ್ಲಾ/ ವಿಭಾಗವಾರು ಅಧಿಸೂಚನೆಗಳನ್ನು ಹೊರಡಿಸಲಾಗಿತ್ತು. ಸದರಿ ಅಧಿಸೂಚನೆಗಳಲ್ಲಿ ನಿಗದಿಪಡಿಸಲಾಗಿದ್ದ ಕೊನೆಯ ದಿನಾಂಕವನ್ನು ಈ ಕೆಳಕಂಡಂತೆ ವಿಸ್ತರಿಸಲಾಗಿದೆ.

| | |
|---|---|
| ಅಭ್ಯರ್ಥಿಗಳು ಆನ್‌ಲೈನ್ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ: | 26.10.2026 |
| ಪಾವತಿಸಿರುವ ಶುಲ್ಕವನ್ನು ಖಚಿತಪಡಿಸಿಕೊಳ್ಳುವ ಕೊನೆಯ ದಿನಾಂಕ: | 28.10.2026 |

ಆನ್‌ಲೈನ್ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವನ್ನು ವಿಸ್ತರಿಸಲಾದ ಹಿನ್ನೆಲೆಯಲ್ಲಿ ಅಧಿಸೂಚನೆಯಲ್ಲಿ ಪ್ರಸ್ತಾಪಿಸಲಾಗಿದ್ದ ಪರೀಕ್ಷೆಗಳನ್ನು ಮುಂದೂಡಲಾಗಿದೆ. 2026ರ ನವೆಂಬರ್ /ಡಿಸೆಂಬರ್ ತಿಂಗಳಲ್ಲಿ ಪರೀಕ್ಷೆಯನ್ನು ನಡೆಸಲು ಉದ್ದೇಶಿಸಲಾಗಿದ್ದು ವೇಳಾಪಟ್ಟಿಯನ್ನು ಮುಂಬರುವ ದಿನಗಳಲ್ಲಿ ಪ್ರಕಟಿಸಲಾಗುವುದು. ಈ ಬಗ್ಗೆ ಸೇರ್ಪಡೆ ಅಧಿಸೂಚನೆಗಳನ್ನು ಕರ್ನಾಟಕ ರಾಜ್ಯ ಪತ್ರದಲ್ಲಿ ಹೊರಡಿಸಿದೆ. ಅಂತೆಯೇ ಸದರಿ ಸೇರ್ಪಡೆ ಅಧಿಸೂಚನೆಗಳನ್ನು ಇಲಾಖಾ ವೆಬ್ ಸೈಟ್ https://schooleducation.karnataka.gov.in/cacell/en ನಲ್ಲಿಯೂ ಸಹ ಪ್ರಕಟಿಸಲಾಗಿದೆ.

ಅಭ್ಯರ್ಥಿಗಳು ಹೆಚ್ಚಿನ ಮಾಹಿತಿ ಅಗತ್ಯವಿದ್ದಲಿ, ಆಯಾ ಜಿಲ್ಲಾ ಉಪನಿರ್ದೇಶಕರು (ಆಡಳಿತ) ಹಾಗೂ ನೇಮಕಾತಿ ಪ್ರಾಧಿಕಾರಗಳ ಕಛೇರಿಯಿಂದ ಪಡೆಯಬಹುದು. ಅಂತೆಯೇ ಕೇಂದ್ರೀಕೃತ ದಾಖಲಾತಿ ಘಟಕದ ಸಹಾಯವಾಣಿ: 080-22483140, 22483145, 9449588020 ಈ ಸಂಖ್ಯೆಗಳಿಗೆ ಹಾಗೂ ಈ ಕಛೇರಿಯ ಇ-ಮೇಲ್ ವಿಳಾಸ: cackarnataka1@gmail.com ಕ್ಕೆ ಸಂಪರ್ಕಿಸಬಹುದಾಗಿದೆ.

ಸಹಿ/-
ಆಯುಕ್ತರು
ಶಾಲಾ ಶಿಕ್ಷಣ ಇಲಾಖೆ
ಬೆಂಗಳೂರು